ಎಲ್.ಕೆ. ಅತೀಕ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
L.K. Atheeq, I.A.S.,
Principal Secretary to Government

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಸಂ: ಗ್ರಾಅಪ/46/ಇ-ಆಡಳಿತ/2020 ದಿನಾಂಕ:27.11.2020

ಇವರಿಗೆ:

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸೇವೆಗಳನ್ನು ಆನ್‌ಲೈನ್ ಮೂಲಕ ವಿತರಿಸುವುದನ್ನು ಕಡ್ಡಾಯಗೊಳಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/46/ಇ-ಆಡಳಿತ/2020, ಬೆಂಗಳೂರು, ದಿನಾಂಕ:28.10.2020

*****

ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಮತ್ತು (ತಿದ್ದುಪಡಿ) ನಿಯಮ, 2014 ಗಳ ಅನುಸೂಚಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ 12 ನಾಗರೀಕ ಸೇವೆಗಳನ್ನು ಕರ್ನಾಟಕ ಸಕಾಲ ಸೇವೆಗಳಡಿಯಲ್ಲಿ ಗುರುತಿಸಲಾಗಿದೆ.

ಸಕಾಲ ಯೋಜನೆಯಡಿ ಅಧಿಸೂಚಿಸಲಾಗಿರುವ ಸೇವೆಗಳನ್ನು ಮತ್ತಷ್ಟು ನಾಗರೀಕ ಸ್ನೇಹಿಯನ್ನಾಗಿಸಲು ಮತ್ತು ಸಕಾಲದಡಿ ಅಧಿಸೂಚಿಸಲಾಗಿರುವ ಸೇವೆಗಳಿಗೆ ನಾಗರೀಕರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಇಲಾಖೆಗಳು ಕಾರ್ಯಪ್ರವೃತ್ತರಾಗಬೇಕಾಗಿರುತ್ತದೆ.

ಈ ಸಂಬಂಧ ಸೇವೆಗಳ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸ್ವೀಕರಿಸಿ, ಸಂಸ್ಕರಿಸಿ ಮತ್ತು ವಿತರಿಸುವಂತೆ ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ ಮತ್ತು ಗ್ರಾಮ ಪಂಚಾಯತಿಗಳಲ್ಲಿ ಸ್ವೀಕೃತವಾಗುವ ಸೇವೆಗಳ ಅರ್ಜಿಗಳನ್ನು ಆನ್‌ಲೈನ್ ತಂತ್ರಾಂಶದಲ್ಲಿ ಅಳವಡಿಸಿ ತಂತ್ರಾಂಶದ ಮೂಲಕವೇ ಸೇವೆಗಳ ವಿಲೇವಾರಿ ಮಾಡುವ ಅವಶ್ಯಕತೆಯಿರುತ್ತದೆ. ಗ್ರಾಮ ಪಂಚಾಯತ್‌ಗಳಿಗೆ ಪಾವತಿಸಬೇಕಾಗಿರುವ ಆಸ್ತಿ ತೆರಿಗೆ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಲು ನಾಗರೀಕರಿಗೆ ಬಾಪೂಜಿ ಸೇವಾ ಕೇಂದ್ರ ತಂತ್ರಾಂಶದ ಮೂಲಕ ಅವಕಾಶ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯತ್‌ಗಳಲ್ಲಿ ನಾಗರೀಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಸಕಾಲ ತಂತ್ರಾಂಶದಲ್ಲಿ ನೋಂದಣಿ ಮಾಡದೇ ಸಕಾಲ ಅಧಿನಿಯಮದ ಉಲ್ಲಂಘನೆಯನ್ನು (ಸಕಾಲ ತಂತ್ರಾಂಶವನ್ನು Bypass) ತಡೆಗಟ್ಟಲು ಸಕಾಲ ಅರ್ಜಿ ಸಂಖ್ಯೆ (GSC ಸಂಖ್ಯೆ) ಇಲ್ಲದೇ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಡಿಜಿಟಲ್ ಸಹಿ ಇಲ್ಲದೇ ವಿತರಿಸಲಾಗುವ ಯಾವುದೇ ಪ್ರಮಾಣ ಪತ್ರಗಳಿಗೆ ಕಾನೂನು ಬದ್ಧವಾಗಿ ಇನ್ನು ಮುಂದೆ ಮಾನ್ಯವಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಕೆಳಕಂಡ ಸಕಾಲ ಸೇವೆಗಳ ಅರ್ಜಿ ಸ್ವೀಕೃತಿ, ವಿಲೇವಾರಿ ಹಾಗೂ ಪ್ರಮಾಣ ಪತ್ರ ವಿತರಣೆಗಾಗಿ ಮತ್ತು ಆನ್‌ಲೈನ್ ಮೂಲಕ ತೆರಿಗೆ ಪಾವತಿಗಾಗಿ ಬಾಪೂಜಿ ಸೇವಾ ಕೇಂದ್ರ ತಂತ್ರಾಂಶದ ಬಳಕೆಯನ್ನು ಕಡ್ಡಾಯಗೊಳಿಸಿ, ಬಾಪೂಜಿ ಸೇವಾ ಕೇಂದ್ರ ತಂತ್ರಾಂಶವನ್ನು ಅನುಷ್ಠಾನಗೊಳಿಸಿದೆ.

| | |
|---|---|
| ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸೇವೆಗಳು | ನಮೂನೆ 9/11A |
| | ನಮೂನೆ 11B |
| | ವಾಣಿಜ್ಯ ಪರವಾನಗಿ |
| | ಕಟ್ಟಡ ಪರವಾನಗಿ |
| | ರಸ್ತೆ ಅಗೆಯುವುದಕ್ಕಾಗಿ ಅನುಮತಿ |
| | ಕುಡಿಯುವ ನೀರಿನ ನಿರ್ವಹಣೆ |
| | ಬೀದಿ ದೀಪಗಳ ನಿರ್ವಹಣೆ |
| | ಗ್ರಾಮ ನೈರ್ಮಲ್ಯ ನಿರ್ವಹಣೆ |
| | ESCOMS- ಆಕ್ಷೇಪಣೆ ರಹಿತ ಪತ್ರ ವಿತರಣೆ |
| | ದಾಖಲೆ ವಿತರಣೆ (ಜನಸಂಖ್ಯೆ, ಬೆಳೆ, ಜಾನುವಾರು ಗಣತಿ, ಬಿಪಿಎಲ್ ಪಟ್ಟಿ) |

ಇನ್ನು ಮುಂದೆ ನಾಗರೀಕರು ಗ್ರಾಮ ಪಂಚಾಯತ್‌ಗಳಿಗೆ ಭೇಟಿ ನೀಡದೇ ಬಾಪೂಜಿ ಸೇವಾ ಕೇಂದ್ರ ತಂತ್ರಾಂಶದ ಮೂಲಕ ಆಸ್ತಿ ತೆರಿಗೆಯನ್ನು ಪಾವತಿಸಬಹುದು ಹಾಗೂ ವಾಣಿಜ್ಯ ಪರವಾನಗಿ, ಕಟ್ಟಡ ಪರವಾನಗಿ, ರಸ್ತೆ ಅಗೆಯುವುದಕ್ಕಾಗಿ ಅನುಮತಿ ಮತ್ತು ಇತರೇ ಸೇವೆಗಳನ್ನು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ಸೇವೆಗಳನ್ನು ಪಡೆಯಬಹುದಾಗಿದ್ದು, ಅದರಂತೆ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಬಾಪೂಜಿ ಸೇವಾ ಕೇಂದ್ರ ತಂತ್ರಾಂಶದ (ಆನ್‌ಲೈನ್) ಮೂಲಕ ಸ್ವೀಕೃತವಾಗಿರುವ ಅರ್ಜಿಗಳನ್ನು ಪಂಚತಂತ್ರ ತಂತ್ರಾಂಶದ ಮೂಲಕವೇ ಸಂಸ್ಕರಿಸಿ ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ಸೇವೆಗಳ ಪ್ರಮಾಣ ಪತ್ರಗಳನ್ನು ಡಿಜಿಟಲ್ ಸಹಿಯೊಂದಿಗೆ ವಿಲೇವಾರಿ ಮಾಡುವಂತೆ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ನಾಗರೀಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಪಂಚತಂತ್ರ ತಂತ್ರಾಂಶದಲ್ಲಿ ಅಳವಡಿಸಿ, ಸಂಸ್ಕರಿಸಿ ಮತ್ತು ವಿಲೇವಾರಿ ಮಾಡುವಂತೆ (ಇ-ಸ್ವತ್ತು ತಂತ್ರಾಂಶದ ನಮೂನೆ-9/11ಎ ಮತ್ತು ನಮೂನೆ-11ಬಿ ಮಾದರಿಯಲ್ಲಿ) ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಈ ಮೂಲಕ ಸೂಚಿಸಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನಾಗರೀಕರಿಂದ ಬಾಪೂಜಿ ಸೇವಾ ಕೇಂದ್ರ ತಂತ್ರಾಂಶದ ಮೂಲಕ ಸ್ವೀಕೃತವಾಗುವ ಆನ್‌ಲೈನ್ ಅರ್ಜಿಗಳನ್ನು ಸೂಕ್ತ ಕಾರಣವಿಲ್ಲದೇ ತಿರಸ್ಕರಿಸಿದಲ್ಲಿ, ಗ್ರಾಮ ಪಂಚಾಯತ್‌ಗಳಲ್ಲಿ ನಾಗರೀಕರಿಂದ ಸ್ವೀಕೃತವಾಗುವ ಪಂಚತಂತ್ರ/ಸಕಾಲ ತಂತ್ರಾಂಶದಲ್ಲಿ ನೋಂದಣಿ ಮಾಡದೇ ಸಕಾಲ ಅಧಿನಿಯಮದ ಉಲ್ಲಂಘನೆಗೆ (ಸಕಾಲ ತಂತ್ರಾಂಶವನ್ನು Bypass) ಕಾರಣರಾದ ಮತ್ತು ಡಿಜಿಟಲ್ ಸಹಿ ಇಲ್ಲದೇ ಪ್ರಮಾಣ ಪತ್ರಗಳನ್ನು

ವಿತರಿಸುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957 ರನ್ವಯ ಶಿಸ್ತು ಕ್ರಮ ಜರುಗಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸೂಚಿಸಿದೆ.

ಶುಭಾಶಯಗಳೊಂದಿಗೆ,

ತಮ್ಮ ವಿಶ್ವಾಸಿ,

27/11/2020

ಪ್ರತಿ:

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪಕಾರ್ಯದರ್ಶಿಗಳು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಹಣಾಧಿಕಾರಿಗಳು.
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್ ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.